ಕರ್ನಾಟಕಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMI0EST(10)36/2024(1807

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 12-02-2025

**ಹಿಂಬರಹ**

ಸರ್ಕಾರದ ಆದೇಶ ಸಂಖ್ಯೆ: ಇಡಿ 346 ಟಿಇಸಿ 2025 ದಿನಾಂಕ:28-01-2025 ರ ಆದೇಶದಲ್ಲಿ ಹೆಸರಿಸಲಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ 6ನೇ ಎಐಸಿಟಿಇ ವೇತನಶ್ರೇಣಿ ರೂ.15600-39100+ಎಜಿಪಿ ರೂ.8000(ಹಂತ-3) ರಿಂದ ವೇತನ ಶ್ರೇಣಿ 37400-67000+ಎಜಿಪಿ ರೂ.9000 (ಹಂತ-4) ರಲ್ಲಿ ಸಹಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಿರುವ ಸರ್ಕಾರದ ಆದೇಶವನ್ನು ಸಂಬಂಧಪಟ್ಟ ಅಧ್ಯಾಪಕರುಗಳಿಗೆ ಹಾಗೂ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

**ನಿರ್ದೇಶಕರು**
ತಾಂತ್ರಿಕ ಶಿಕ್ಷಣ ಇಲಾಖೆ,

**ಇವರಿಗೆ**:-

1. ಮಹಾಲೇಖಪಾಲರು, ಎ&ಇ, ಬೆಂಗಳೂರು;
2. ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ;
3. ಸಂಬಂಧಪಟ್ಟ ಅಧ್ಯಾಪಾಕರುಗಳು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಮುಖಾಂತರ)
4. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು)

**ಪ್ರತಿ**:-

1. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ), ಬಹುಮಹಡಿ ಕಟ್ಟಡ, ಬೆಂಗಳೂರು;
2. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಹೆಚ್ಚುವರಿ ಪ್ರತಿ ಕಡತಕ್ಕೆ.

94063611/25

DIRECTOR | EST-10

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ
ಸಂಖ್ಯೆ 141
ದಿನಾಂಕ 29 JAN 2025

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರಿಗೆ ಎಐಸಿಟಿಇ 6ನೇ ವೇತನ ಶ್ರೇಣಿರಡಿ ರೂ. 8000 ರಿಂದ ರೂ. 9000 ಎ.ಜಿ.ಪಿ.ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 96 ಡಿಟಿಇ 2010, ದಿನಾಂಕ: 31.03.2011.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 20 ಡಿಟಿಇ 2018, ದಿನಾಂಕ: 08.12.2020.
3. ಸರ್ಕಾರದ ಪತ್ರ ಸಂಖ್ಯೆ: ಇಡಿ 186 ಡಿಟಿಇ 2020, ದಿನಾಂಕ: 30.09.2021.
4. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಏಕ ಕಡತ ಸಂಖ್ಯೆ: DTE-ADMI0EST(10)/36/2024.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ... ಸಂ. 1370 ದಿ. 01/2/25

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6ನೇ ಎಐಸಿಟಿಇ ವೇತನವನ್ನು ದಿನಾಂಕ:01.01.2006 ರಿಂದ ಅನ್ವಯಿಸುವಂತೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ (CAS) ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. All India Council for Technical Education (Career Advancement scheme for the teachers and other Academic staff in Technical Institutions) (Degree) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ: 07.11.2015ರವರೆಗೆ ವಿನಾಯಿತಿ ನೀಡಿ ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ವೃತ್ತಿ ಪದೋನ್ನತಿ (CAS) ಸೌಲಭ್ಯವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಸರ್ಕಾರದ ಪತ್ರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸಲು ಪ್ರತ್ಯೇಕ ಸ್ಥಾನೀಕರಣ ಸಮಿತಿಯನ್ನು ರಚಿಸುವ ಅಧಿಕಾರವನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಪ್ರತ್ಯಾಯೋಜಿಸಲಾಗಿದೆ.

ತಾಂತ್ರಿಕ ಶಿಕ್ಷಣ ಇಲಾಖೆ
ನಿರ್ದೇಶಕರ ಆಪ್ತ ಶಾಖೆ
ಸಂಖ್ಯೆ: 680
ದಿನಾಂಕ: 3/2/25

03/02/25 EST-10

ಮೇಲೆ ಓದಲಾದ (4)ರ ಆಯುಕ್ತರ ಏಕಕಡತದಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ವಿಷಯ ತಜ್ಞರುಗಳನ್ನೊಳಗೊಂಡ ಸ್ಥಾನೀಕರಣ ಸಮಿತಿಯು ದಿನಾಂಕ:07.03.2024 ರಿಂದ 14.03.2024ರವರೆಗೆ ಸಭೆ ಸೇರಿ ಸರ್ಕಾರಿ ಇಂಜಿನಿಯರಿಂಗ್ ಗಣಕಯಂತ್ರ ಇಂಜಿನಿಯರಿಂಗ್ ವಿಭಾಗದ 04 ಸಹಾಯಕ ಪ್ರಾಧ್ಯಾಪಕರು, ಮತ್ತು ಸಿವಿಲ್ ವಿಭಾಗದ 01 ಸಹಾಯಕ ಪ್ರಾಧ್ಯಾಪಕರುಗಳನ್ನೊಳಗೊಂಡಂತೆ ಒಟ್ಟು 05 ಸಹಾಯಕ ಪ್ರಾಧ್ಯಾಪಕರುಗಳು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸಹ ಪ್ರಾಧ್ಯಾಪಕರ ಹುದ್ದೆಗೆ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯಕ್ಕೆ ನಿಯಮಾನುಸಾರ ಅರ್ಹತೆ ಹೊಂದಿರುವ ಬಗ್ಗೆ ಪರಿಶೀಲಿಸಿ, ಸದರಿಯವರಿಗೆ ವೃತ್ತಿ ಪದೋನ್ನತಿಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಒಟ್ಟು 05 ಸಹಾಯಕ ಪ್ರಾಧ್ಯಾಪಕರುಗಳಿಗೆ 6ನೇ ವೇತನ ಶ್ರೇಣಿಯಲ್ಲಿ ರೂ.8000 ಎಜಿಪಿ ಯಿಂದ ರೂ.9000 ಎಜಿಪಿಗೆ ಸದರಿಯವರುಗಳು ಮುಂಬಡ್ತಿಗೆ ಅರ್ಹತೆ ಪಡೆದ ದಿನಾಂಕದಿಂದ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸಹ ಪ್ರಾಧ್ಯಾಪಕರ ಹುದ್ದೆಗೆ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯವನ್ನು ಮಂಜೂರು ಮಾಡುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಕೋರಿರುತ್ತಾರೆ.

ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಪ್ರಸ್ತಾವನೆಯಲ್ಲಿರುವ 5 ಸಹಾಯಕ ಪ್ರಾಧ್ಯಾಪಕರುಗಳಲ್ಲಿ ಡಾ|| ರಘು ಎಂ.ಇ, ಸಹಾಯಕ ಪ್ರಾಧ್ಯಾಪಕರು ಮತ್ತು ಡಾ|| ಶಭೀನಾ ತಾಜ್ ಜಿ.ಎ. ಸಹಾಯಕ ಪ್ರಾಧ್ಯಾಪಕರು ಇವರುಗಳ ನೇಮಕಾತಿ ಆದೇಶದಲ್ಲಿ ನೇಮಕಾತಿ ಹೊಂದಿದ ದಿನಾಂಕದಿಂದ 07 ವರ್ಷಗಳ ನಂತರ ಪಿ.ಹೆಚ್.ಡಿ ಪದವಿಯನ್ನು ಪೂರೈಸುವ ಷರತ್ತನ್ನು ವಿಧಿಸಲಾಗಿದೆ. ಸದರಿ ಸಹಾಯಕ ಪ್ರಾಧ್ಯಾಪಕರುಗಳು 07 ವರ್ಷಗಳ ನಂತರ ಪಿಎಚ್.ಡಿ ಪದವಿ ಪಡೆದಿರುತ್ತಾರೆ. ಈ ವಿಷಯದ ಕುರಿತು ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ: 5296/2018 ರಲ್ಲಿ ದಿನಾಂಕ: 30.05.2022 ರಂದು ನೀಡಿರುವ ತೀರ್ಪಿನ ಕಂಡಿಕೆ-10 ರಲ್ಲಿ ಕೆಲವೊಂದು ನಿರ್ದೇಶನ ನೀಡಿರುತ್ತದೆ. ಆದರೆ ಸದರಿ ಆದೇಶ ಭಾಗದ ಕಂಡಿಕೆ-10 ಕ್ಕೆ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:4458/2024ರಲ್ಲಿ ದಿನಾಂಕ:07.02.2024ರಂದು ತಡೆಯಾಜ್ಞೆ ನೀಡಿರುತ್ತದೆ. ಹೀಗಾಗಿ ಇಂತಹ ಪ್ರಕರಣಗಳಲ್ಲಿ ಕೈಗೊಳ್ಳಬಹುದಾದ ಮುಂದಿನ ಕ್ರಮದ ಬಗ್ಗೆ ಪರಿಶೀಲಿಸುತ್ತಿರುವ ಹಿನ್ನೆಲೆಯಲ್ಲಿ ಸದರಿ ಇಬ್ಬರು ಸಹಾಯಕ ಪ್ರಾಧ್ಯಾಪಕರುಗಳನ್ನು ಸದ್ಯಕ್ಕೆ ಪದೋನ್ನತಿಗೆ ಪರಿಗಣಿಸದಿರಲು ತೀರ್ಮಾನಿಸಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 03 ಸಹಾಯಕ ಪ್ರಾಧ್ಯಾಪಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ (CAS) ಯಡಿ 6ನೇ ಎಐಸಿಟಿಇ ವೇತನ ಶ್ರೇಣಿ ರಡಿ ರೂ.15,600 - 39100 + ಎಜಿಪಿ ರೂ.8000 (ಹಂತ-3) ರಿಂದ ವೇತನ ಶ್ರೇಣಿ 37400-67000 +

ಎಜಿಪಿ ರೂ.9000 (ಹಂತ-4) ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಲು ಸರ್ಕಾರವು ತೀರ್ಮಾನಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 346 ಟಿಇಸಿ 2024**

**ಬೆಂಗಳೂರು, ದಿನಾಂಕ: 28ನೇ ಜನವರಿ 2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 03 ಸಹಾಯಕ ಪ್ರಾಧ್ಯಾಪಕರುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ(CAS)ಯಡಿ 6ನೇ ಎಐಸಿಟಿಇ ವೇತನ ಶ್ರೇಣಿರಡಿ ರೂ.15,600 - 39100 + ಎಜಿಪಿ ರೂ.8000 (ಹಂತ-3) ರಿಂದ ವೇತನ ಶ್ರೇಣಿ 37400-67000 + ಎಜಿಪಿ ರೂ.9000 (ಹಂತ-4) ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಿ ಆದೇಶಿಸಿದೆ.

| ಕ್ರ. ಸಂ. | ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ಸೇವೆಗೆ ಸೇರಿದ ದಿನಾಂಕ | ಮುಂಬಡ್ತಿಗೆ ಅರ್ಹತೆ ಪಡೆದ ದಿನಾಂಕ |
|---|---|---|---|
| | **ಗಣಕಯಂತ್ರ ವಿಭಾಗ** | | |
| 1. | **ಡಾ. ನಾಗರಾಜ ಬಿ.ಪಾಟೀಲ**<br>ಸಹಾಯಕ ಪ್ರಾಧ್ಯಾಪಕರು<br>ಸರ್ಕಾರಿ ಎಸ್‌ಕೆಎಸ್‌ಜೆಟಿಐ<br>ಬೆಂಗಳೂರು | 04.10.2010 | 04.10.2013 |
| 2. | **ಡಾ. ಶಶಿಕಲಾ ಪರಮೇಶ್ವರಪ್ಪಾ**<br>ಸಹಾಯಕ ಪ್ರಾಧ್ಯಾಪಕರು<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜು<br>ರಾಯಚೂರು | 15.10.2010 | 29.04.2016 |
| | **ಕಾಮಗಾರಿ ವಿಭಾಗ** | | |
| 3. | **ಡಾ. ಮನೋಜ್ ಕೃಷ್ಣ ಕೆ.ವಿ**<br>ಸಹಾಯಕ ಪ್ರಾಧ್ಯಾಪಕರು<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜು<br>ಹಾಸನ | 05.10.2010 | 05.10.2013 |

**ಷರತ್ತುಗಳು:**

i. 2010 ಮತ್ತು 2012ರ ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಎ.ಪಿ.ಐ ಅಂಕಗಳ ಆಧಾರಿತ ಎ.ಜಿ.ಪಿ ಮಂಜೂರಾತಿಯು ಸರ್ಕಾರದ ಮಾರ್ಗಸೂಚಿ/ ಆದೇಶಗಳಲ್ಲಿನ ನಿಬಂಧನೆಗೊಳಪಟ್ಟಿರುತ್ತದೆ.

ii. ಎ.ಜಿ.ಪಿ ಮಂಜೂರಾತಿಯು ಎಐಸಿಟಿಇ/ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆ/ಪತ್ರಗಳಲ್ಲಿ ನಿಗದಿಪಡಿಸುವ ಷರತ್ತು/ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

iii. ಸದರಿ ಪದೋನ್ನತಿಯ ಆರ್ಥಿಕ ಸೌಲಭ್ಯವನ್ನು ಭವಿಷ್ಯವರ್ತಿಯಾಗಿ ಅಂದರೆ, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಜಾರಿಗೊಳಿಸುವುದು.

iv. ಅರ್ಹ ಸಹಾಯಕ ಪ್ರಾಧ್ಯಾಪಕರುಗಳು ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಯಾವುದೇ ತಪ್ಪು ಮಾಹಿತಿಗಳನ್ನು ಒದಗಿಸಿರುವುದು ಕಂಡು ಬಂದಲ್ಲಿ ಸಂಬಂಧಿಸಿದ ಸಹಾಯಕ ಪ್ರಾಧ್ಯಾಪಕರ ಎ.ಜಿ.ಪಿ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ನೀಡದೇ ಹಿಂಪಡೆಯಲಾಗುವುದು ಹಾಗೂ ತಪ್ಪು ಮಾಹಿತಿ ಒದಗಿಸಿದ ಸಹಾಯಕ ಪ್ರಾಧ್ಯಾಪಕರ ವಿರುದ್ಧ ಕ್ರಮ ಜರುಗಿಸಲಾಗುವುದು.

v. ಸರ್ಕಾರದ ಆದೇಶ ಸಂಖ್ಯೆ: ಇಡಿ 20 ಡಿಟಿಇ 2018, ದಿ: 08.12.2020ರ ಪತ್ರದಲ್ಲಿ ಸೂಚಿಸಿದಂತೆ ಎಪಿಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ 07.11.2015 ರ ವರೆಗೆ ವಿನಾಯಿತಿ ನೀಡಲಾಗಿದೆ.

vi. ಸದರಿ ಬೋಧಕ ಸಿಬ್ಬಂದಿಗಳು ಸಿಎಎಸ್ ಮುಂಬಡ್ತಿಗೆ ಎಲ್ಲಾ ರೀತಿಯಲ್ಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ಸ್ಕ್ರೀನಿಂಗ್ ಆಯ್ಕೆ ಸಮಿತಿಯು ಮಾಡಿರುವ ಶಿಫಾರಸ್ಸಿನಂತೆ ಪರಿಗಣಿಸಲಾಗಿದೆ.

vii. ಈ ಆದೇಶದನ್ವಯ ಮಂಜೂರು ಮಾಡಲಾದ ಎ.ಜಿ.ಪಿ.ಯು ಸ್ಥಳೀಯ/ ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಡಿಸಿದಾಗ, ಯಾವುದೇ ಅಸಂಗತಗಳು ಕಂಡು ಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

viii. ಸಹಾಯಕ ಪ್ರಾಧ್ಯಾಪಕರುಗಳ ಎ.ಜಿ.ಪಿ ಮಂಜೂರಾತಿಯ ವಿವರಗಳನ್ನು ಸಂಬಂಧಪಟ್ಟ ನೌಕರರ ಸೇವಾ ಪುಸ್ತಕದಲ್ಲಿ ನಮೂದಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

ix. ಈ ವೃತ್ತಿ ಪದೋನ್ನತಿಯನ್ನು ಸೇವಾ ಜೇಷ್ಠತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

x. ಸದರಿಯವರ ವೇತನ ಶ್ರೇಣಿಯನ್ನು 7ನೇ AICTE ಪರಿಷ್ಕೃತ ವೇತನ ಶ್ರೇಣಿಯಡಿ ಸಂವಾದಿಯಾಗಿ ನಿಗದಿಪಡಿಸಲು ನಿಯಮಾನುಸಾರ ಅಗತ್ಯ ಕ್ರಮವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 51 Exp-8/2023, ದಿನಾಂಕ:03.03.2023 ರಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/01/2025

**(ಮಹಾಂತಪ್ಪ ಎಸ್.ತುರಕನೂರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

28/01

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಸಂಬಂಧಪಟ್ಟ ಸಹ ಪ್ರಾಧ್ಯಾಪಕರುಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆರವರ ಕಛೇರಿಯ ಮೂಲಕ)

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.